ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಇತರೆ ರಾಜ್ಯಗಳ ಮಾಹಿತಿ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ     ದಿನಾಂಕ : DATE : 22/12/2019

# ಮಹಾ ರೈತರಿಗೆ ಎರಡು ಲಕ್ಷ ರೂ. ಸಾಲಮನ್ನಾ

ನಾಗ್ಪುರ: ಮಹಾರಾಷ್ಟ್ರದಲ್ಲಿ ಶಿವಸೇನೆ ನೇತೃತ್ವದ ಎನ್‌ಸಿಪಿ-ಕಾಂಗ್ರೆಸ್ ಮೈತ್ರಿ ಸರ್ಕಾರ, 2 ಲಕ್ಷ ರೂ.ವರೆಗೆ ರೈತರ ಸಾಲ ಮನ್ನಾ ಮಾಡುವುದಾಗಿ ಘೋಷಿಸಿದೆ. ವಿಧಾನಸಭೆ ಕಲಾಪದಲ್ಲಿ ಶನಿವಾರ ಸಾಲ ಮನ್ನಾ ಯೋಜನೆಯನ್ನು ಪ್ರಕಟಿಸಿರುವ ಮುಖ್ಯಮಂತ್ರಿ ಉದ್ಧವ್ ಠಾಕ್ರೆ, 2019ರ ಸೆಪ್ಟೆಂಬರ್ 30ವರೆಗೆ ಅನ್ವಯ ಆಗುವಂತೆ ಎಲ್ಲ ರೈತರ 2 ಲಕ್ಷ ರೂ.ವರೆಗಿನ ಸಾಲ ಮನ್ನಾ ಮಾಡಲಾಗುವುದು. ಇದಕ್ಕೆ ಮಹಾತ್ಮ ಜ್ಯೋತಿರಾವ್ ಫುಲೆ ಸಾಲಮನ್ನಾ ಯೋಜನೆ ಎಂದು ಹೆಸರಿಡಲಾಗುವುದು. ಅಲ್ಲದೇ ಸಕಾಲದಲ್ಲಿ ಸಾಲ ಮರುಪಾವತಿಸಿರುವ ರೈತರಿಗೂ ಕಾರ್ಯಕ್ರಮ ರೂಪಿಸುವುದಾಗಿ ಭರವಸೆ ನೀಡಿದ್ದಾರೆ.



■ ಕಲಾಪದಲ್ಲಿ ಘೋಷಣೆ ಮಾಡಿದ ಸಿಎಂ ಉದ್ಧವ್ ಠಾಕ್ರೆ

ರೈತರಿಗೆ ದ್ರೋಹ: ಸಾಲಮನ್ನಾ ಯೋಜನೆಯು ರೈತರಿಗೆ ಎಸಗಿದ ದ್ರೋಹವಾಗಿದೆ. ಇದರ ವಿರುದ್ಧ ರಾಜ್ಯಾದ್ಯಂತ ಹೋರಾಟ ನಡೆಸಲಾಗುವುದು ಎಂದು ವಿಪಕ್ಷ ನಾಯಕ ದೇವೇಂದ್ರ ಫಡ್ನವೀಸ್ ಎಚ್ಚರಿಕೆ ನೀಡಿದ್ದಾರೆ. 2017ರಲ್ಲಿ ಬಿಜೆಪಿ ನೇತೃತ್ವದ ಸರ್ಕಾರವು 1.5 ಲಕ್ಷ ರೂ.ವರೆಗೆ ಸಾಲಮನ್ನಾ ಮಾಡಿತ್ತು. 2017 ಹಾಗೂ 2019ರ ಅವಧಿಯಲ್ಲಿ ರಾಜ್ಯದ ಬಹುತೇಕ ರೈತರು ಇದರ ಪ್ರಯೋಜನ ಪಡೆದಿದ್ದಾರೆ. ಕೆಲವೇ ರೈತರು ಮಾತ್ರ ಇದರಿಂದ ಹೊರಗುಳಿದಿದ್ದಾರೆ. ಆದರೆ, ಇದೀಗ ಪ್ರಕಟಿಸಿರುವ ಸಾಲಮನ್ನಾ ಯೋಜನೆಯಿಂದ ರೈತರಿಗೆ ಯಾವುದೇ ಉಪಯೋಗ ಆಗುವುದಿಲ್ಲ ಎಂದು ಹರಿಹಾಯ್ದಿದ್ದಾರೆ.